ಕರ್ನಾಟಕ ಸರ್ಕಾರ

( ನೋಂದಣಿ ಮತ್ತು ಮುದ್ರಾಂಕ ಇಲಾಖೆ)

ಸಂಖ್ಯೆ:Comp/09/2003-04

ನೋಂದಣಿ ಮಹಾಪರಿವೀಕ್ಷಕರು ಮತ್ತು
ಮುದ್ರಾಂಕಗಳ ಆಯುಕ್ತರವರ ಕಛೇರಿ,
8ನೇ ಮಹಡಿ, ಕಂದಾಯಭವನ
ಕೆಂಪೇಗೌಡ ರಸ್ತೆ, ಬೆಂಗಳೂರು -09
ದಿನಾಂಕ: 27-10-2017.

## ಸುತ್ತೋಲೆ -27

ವಿಷಯ : **Implementation of action points under Business Reform Action plan 2017- ರಡಿ ಸ್ಥಿರಾಸ್ತಿಗಳಿಗೆ ಸಂಬಂಧಿಸಿದ ದಸ್ತಾವೇಜುಗಳು ಹಾಗೂ ಪಾಲುದಾರಿಕೆ ಸಂಸ್ಥೆಗಳ ನೋಂದಣಿಯನ್ನು ಆನ್‌ಲೈನ್ ಮೂಲಕ ನಿರ್ವಹಿಸುವ ಕುರಿತು.**

******

ಪ್ರಸ್ತಾವಿತ ವಿಷಯಕ್ಕೆ ಸಂಬಂಧಿಸಿದಂತೆ, ಕೇಂದ್ರ ಸರ್ಕಾರದ ಇಂಡಸ್ಟ್ರೀಯಲ್ ಪಾಲಿಸಿ ಮತ್ತು ಪ್ರಮೋಷನ್ ( Department of industrial policy and promotion-GOI ) ಇಲಾಖೆಯ Business reform action plan 2017 ರಂತೆ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಿಂದ ಅನುಷ್ಠಾನಗೊಳಿಸಬೇಕಾದ ಅಂಶಗಳಂತೆ ನೋಂದಣಿ ಕಾಯ್ದೆ 1908 ರಡಿ ಸ್ಥಿರಾಸ್ತಿಗಳಿಗೆ ಸಂಬಂಧಿಸಿದ ದಸ್ತಾವೇಜುಗಳು ಮತ್ತು ಭಾರತೀಯ ಪಾಲುದಾರಿಕೆ ಕಾಯ್ದೆ 1932ರಡಿ ಪಾಲುದಾರಿಕೆ ಸಂಸ್ಥೆಗಳ ನೋಂದಣಿಯನ್ನು ಆನ್‌ಲೈನ್‌ನಲ್ಲಿ ನಿರ್ವಹಿಸಬೇಕಾಗಿರುತ್ತದೆ.

ಈ ನಿಟ್ಟಿನಲ್ಲಿ ಸ್ಥಿರಾಸ್ತಿಗಳಿಗೆ ಸಂಬಂಧಿಸಿದ ದಸ್ತಾವೇಜುಗಳು ಮತ್ತು ಪಾಲುದಾರಿಕೆ ಸಂಸ್ಥೆಗಳ ನೋಂದಣಿಯನ್ನು ಆನ್‌ಲೈನ್‌ನಲ್ಲಿ ನಿರ್ವಹಿಸಲು ತಂತ್ರಾಂಶವನ್ನು ಕ್ರಮವಾಗಿ kaverionline.karnataka.gov.in ಮತ್ತು kaverionlinefirm.karnataka.gov.in ಜಾಲತಾಣದಲ್ಲಿ ಲಾಂಚ್ ಮಾಡಲಾಗಿರುತ್ತದೆ. ಇನ್ನು ಮುಂದೆ ಆನ್‌ಲೈನ್‌ನಲ್ಲಿ ನೋಂದಣಿಗೆ ಅರ್ಜಿ ಸಲ್ಲಿಸಿದಾಗ ರಾಜ್ಯದ ಎಲ್ಲಾ ಜಿಲ್ಲಾನೋಂದಣಾಧಿಕಾರಿಗಳು ಹಾಗೂ ಉಪನೋಂದಣಾಧಿಕಾರಿಗಳು ನೋಂದಣಿಯನ್ನು ಆನ್‌ಲೈನ್‌ನಲ್ಲಿ ನಿರ್ವಹಿಸತಕ್ಕದ್ದು.

**ನೋಂದಣಿ ಮಹಾಪರಿವೀಕ್ಷಕರು ಮತ್ತು
ಮುದ್ರಾಂಕಗಳ ಆಯುಕ್ತರು, ಬೆಂಗಳೂರು.**

**ಇವರಿಗೆ,**

1. ಕೇಂದ್ರ ಕಛೇರಿಯ ಎಲ್ಲಾ ನೋಂದಣಿ ಉಪ ಮಹಾಪರಿವೀಕ್ಷಕರು, ಸಹಾಯಕ ನೋಂದಣಿ ಮಹಾಪರಿವೀಕ್ಷಕರು ಮತ್ತು ಕಾನೂನು ಅಧಿಕಾರಿ ರವರಿಗೆ.
2. ರಾಜ್ಯದ ಎಲ್ಲಾ ಜಿಲ್ಲಾ ನೋಂದಣಾಧಿಕಾರಿಗಳು ಪಾಲನಾ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಉಪ ನೋಂದಣಾಧಿಕಾರಿಗಳು ಪಾಲನಾ ಕ್ರಮಕ್ಕಾಗಿ.